# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(4)/ಪಿಆರ್/190/2022–23

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ:16/1/2023

**ಕಛೇರಿ ಆದೇಶ**

ವಿಷಯ: ಶ್ರೀಮತಿ ಲತಾದೇವಿ, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ, ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: 1) ಆರೋಗ್ಯಾಧಿಕಾರಿ (ದಕ್ಷಿಣ–ಕ್ಲಿನಿಕಲ್) ರವರ ವರದಿ ದಿನಾಂಕ: 16–12–2022.
2) ಮುಖ್ಯ ಆರೋಗ್ಯಾಧಿಕಾರಿ(ಕ್ಲಿನಿಕಲ್) ರವರ ವರದಿ ದಿನಾಂಕ:17–12–2022.

* * * * *

ಶ್ರೀಮತಿ ಲತಾದೇವಿ, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯದಿಂದ ಎರವಲು ಸೇವೆಯ ಮೇಲೆ ಪಾಲಿಕೆಯಲ್ಲಿ ನಿಯೋಜನೆಗೊಂಡು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿ(ದಕ್ಷಿಣ–ಕ್ಲಿನಿಕಲ್)ರವರ ಕಛೇರಿಯಲ್ಲಿ ವೇತನ ಪಡೆದು ಓಓಡಿ ಆಧಾರದ ಮೇಲೆ ಹೊಸಕೆರೆಹಳ್ಳಿ ರೆಫರಲ್ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ಜನ್ಮ ದಿನಾಂಕ: 22–07–1963 ಆಗಿದ್ದು, ದಿನಾಂಕ:21–07–2023ಕ್ಕೆ 60 ವರ್ಷಗಳು ಪೂರ್ಣಗೊಳ್ಳುವುದರಿಂದ, ಉಲ್ಲೇಖ–(1)ರ ಮತ್ತು ಉಲ್ಲೇಖ–(2)ರ ವರದಿಯನ್ವಯ, ದಿನಾಂಕ:31–07–2023ರಂದು ವಯೋನಿವೃತ್ತಿ ಹೊಂದುತ್ತಿರುವುದರಿಂದ ಸದರಿಯವರನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲಸ ಕಾರ್ಯಗಳಿಂದ ಬಿಡುಗಡೆ ಮಾಡಿ, ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

<u>ಷರತ್ತುಗಳು:</u>

1. ಸದರಿಯವರು ನಗರ ಪಾಲಿಕೆಯ ಸೇವಾವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿ ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿಯವರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮ ಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತಿಗೊಳಪಡಿಸಿದೆ.
4. ಸದರಿಯವರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ಹೆಲ್ತ್ ಕಾರ್ಡ್ ಗುರುತಿನ ಚೀಟಿ ಪಡೆದಿದ್ದಲ್ಲಿ ಅವುಗಳನ್ನು ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

(ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದಂತೆ)

Sd/- 16/1
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

13/1/2023 13-1-23 16/01/2023

ಪ್ರತಿಯನ್ನು : ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ,ಮಾಗಡಿ ರಸ್ತೆ ಬೆಂಗಳೂರು ರವರಿಗೆ ಕಳುಹಿಸಿದೆ.

ನಿರ್ದೇಶಕರು ಮಾಹಿತಿ ತಂತ್ರಜ್ಞಾನ ಇಲಾಖೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ 24/1/23
ಮಾಹಿತಿ ತಂತ್ರಜ್ಞಾನ ಇಲಾಖೆ Dir.IT/GL/154/22-23 23-01-2023
1182 25/1/23

Srinidhi 25/1/23

FDC 25/01/25

: ಮುಲೆಅ/ಮುಲೆಪ/ಉ.ನಿ./ಸ.ನಿ.(ಹಣಕಾಸು–ಕೇಂದ್ರ)/ದಕ್ಷಿಣ ರವರಿಗೆ ಕಳುಹಿಸಿದೆ.

: ಮುಖ್ಯ ಆರೋಗ್ಯಾಧಿಕಾರಿ(ಕ್ಲಿನಿಕಲ್) ರವರಿಗೆ ಕಳುಹಿಸಿದೆ.

: ವೈದ್ಯಕೀಯ ಅಧೀಕ್ಷಕರು ಹೊಸಕೆರೆಹಳ್ಳಿ ರೆಫರಲ್ ಆಸ್ಪತ್ರೆ ರವರಿಗೆ ಕಳುಹಿಸಿದೆ.

: ಆರೋಗ್ಯಾಧಿಕಾರಿ (ದಕ್ಷಿಣ–ಕ್ಲಿನಿಕಲ್) ರವರಿಗೆ ಕಳುಹಿಸಿದೆ.

: ನಿರ್ದೇಶಕರು, ಮಾಹಿತಿ ತಂತ್ರಜ್ಞಾನ ರವರಿಗೆ ಕಳುಹಿಸಿದೆ.

: ಮುಖ್ಯಸ್ಥರು, ಹೊಸಕೆರೆ ಹಳ್ಳಿ ರೆಫರಲ್ ಆಸ್ಪತ್ರೆಯಲ್ಲಿ ರವರಿಗೆ ಕಳುಹಿಸಿದೆ.

: ಸದರಿ ನೌಕರರಿಗೆ / ಕಛೇರಿ ಪ್ರತಿ.